# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | 934 |
| ಮಾನ್ಯ ಸದಸ್ಯರ ಹೆಸರು | ಶ್ರೀ ಯು.ಬಿ ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | 22/02/2024 |
| ಉತ್ತರಿಸುವವರು | ಮಾನ್ಯ ಕಾರ್ಮಿಕ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಕಾರ್ಮಿಕರ ಹೆಸರಿನಲ್ಲಿ ನೋಂದಾಯಿಸಿಕೊಂಡಿರುವ ಕಾರ್ಮಿಕರಲ್ಲದವರನ್ನು ಸರ್ಕಾರ ಗುರುತಿಸಿದೆಯೇ; ಗುರುತಿಸಿದ್ದಲ್ಲಿ ಅದರ ಅಂಕಿ ಸಂಖ್ಯೆಗಳೇನು; (ಜಿಲ್ಲಾವಾರು ಮಾಹಿತಿ ಒದಗಿಸುವುದು) | ರಾಜ್ಯದಲ್ಲಿ ಕಾರ್ಮಿಕರ ಹೆಸರಿನಲ್ಲಿ ನೋಂದಾಯಿಸಿ ಕೊಂಡಿರುವ ಕಾರ್ಮಿಕರಲ್ಲದವರನ್ನು ಗುರುತಿಸುವ ಪ್ರಕ್ರಿಯೆ ಚಾಲ್ತಿಯಲ್ಲಿದ್ದು, ಕಾರ್ಮಿಕ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿಧ ಮಂಡಳಿಗಳಲ್ಲಿ ಕಾರ್ಮಿಕರಲ್ಲದೆ ನೋಂದಾಯಿತರಾಗಿರುವ ಅನರ್ಹ ಫಲಾನುಭವಿಗಳ ವಿವರ ಈ ಕೆಳಕಂಡಂತಿದೆ.<br><br>**<u>ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ:</u>**<br><br>ರಾಜ್ಯದಲ್ಲಿ ಮಂಡಳಿಯು ನಿಗಧಿಪಡಿಸಿರುವ ಅರ್ಹತಾ ಮಾನದಂಡಗಳನ್ನು ಪೂರೈಸದೇ ನೋಂದಣಿಯಾದ ಕಾರ್ಮಿಕರನ್ನು ಪತ್ತೆ ಹಚ್ಚಲಾಗಿದ್ದು, ರಾಜ್ಯದಾದ್ಯಂತ **3,54,128** ಅನರ್ಹ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ನೋಂದಣಿಯಾಗಿರುತ್ತಾರೆ. ಅವರ ಜಿಲ್ಲಾವಾರು ವಿವರವನ್ನು **ಅನುಬಂಧದಲ್ಲಿ** ಒದಗಿಸಿದೆ.<br><br>**<u>ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ:</u>**<br><br>ಈ ಮಂಡಳಿಯು ಜಾರಿಗೊಳಿಸುತ್ತಿರುವ ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ ಮತ್ತು ಕರ್ನಾಟಕ ರಾಜ್ಯ ಗಿಗ್ ಕಾರ್ಮಿಕರ ವಿಮಾ ಯೋಜನೆಯಡಿ ನೋಂದಣಿಗಾಗಿ ಸಲ್ಲಿಸಲಾದ ಅರ್ಜಿಗಳನ್ನು ನೋಂದಣಾಧಿಕಾರಿಗಳಾದ ಕಾರ್ಮಿಕ ಅಧಿಕಾರಿಗಳು/ ಕಾರ್ಮಿಕ ನಿರೀಕ್ಷಕರುಗಳು ಯೋಜನೆಗಳ ಮಾನದಂಡಗಳನ್ವಯ ನೋಂದಾಯಿಸುತ್ತಿದ್ದು, ಯಾವುದೇ ಅನರ್ಹ ಕಾರ್ಮಿಕರು ನೋಂದಣಿಯಾಗಿರುವುದಿಲ್ಲ. |

| | | |
|---|---|---|
| | | ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆಯಡಿ ಸಾರಿಗೆ ಇಲಾಖೆಯಿಂದ ಖಾಸಗಿ ವಾಣಿಜ್ಯ ವಾಹನವನ್ನು ಚಲಾಯಿಸಲು ಊರ್ಜಿತ ಚಾಲನ ಪರವಾನಗಿ ಪಡೆದ ಎಲ್ಲಾ ಚಾಲಕರನ್ನು ಫಲಾನುಭವಿಗಳಾಗಿ ಗುರುತಿಸಿದ್ದು, ಯೋಜನೆಯಡಿ ಪ್ರತ್ಯೇಕ ನೋಂದಣಿಯ ಅವಶ್ಯಕತೆ ಇರುವುದಿಲ್ಲ. ಆದಾಗ್ಯೂ, ಪರಿಹಾರ ಒದಗಿಸುವ ಸಮಯದಲ್ಲಿ ಯೋಜನೆಯ ಮಾರ್ಗಸೂಚಿಯನ್ವಯ ಸಲ್ಲಿಸಿದ ದಾಖಲೆಗಳನ್ನು ಕೂಲಂಕುಷವಾಗಿ ಪರಿಶೀಲಿಸಿ, ಸ್ಥಳ ಪರಿಶೀಲನೆ ನಡೆಸಿ ನೈಜತೆಯ ಆಧಾರದ ಮೇಲೆ ಪರಿಹಾರವನ್ನು ಒದಗಿಸಲಾಗುತ್ತಿದೆ.<br><br>ಮುಂದುವರೆದು, ಎಲ್ಲಾ ಅಸಂಘಟಿತ ಕಾರ್ಮಿಕರನ್ನು ನೋಂದಾಯಿಸಲು ಕೇಂದ್ರ ಸರ್ಕಾರವು ಇ-ಶ್ರಮ್ ಪೋರ್ಟಲ್ ಅನ್ನು ಅಭಿವೃದ್ಧಿಪಡಿಸಿದ್ದು, ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಕಾಯ್ದೆ, 2008ರನ್ವಯ ಸ್ವಯಂ ಘೋಷಣೆ ಆಧಾರದ ಮೇಲೆ ನೋಂದಣಿ ಕಾರ್ಯ ನಡೆಸಲಾಗುತ್ತಿದೆ. ಕಾರ್ಮಿಕರ ಅರ್ಹತೆಯನ್ನು ಪರಿಶೀಲಿಸಲು ಕೇಂದ್ರ ಸರ್ಕಾರವು Data Verification Portal ಅಭಿವೃದ್ಧಿ ಪಡಿಸುತ್ತಿದ್ದು, ತಂತ್ರಾಂಶ ಅಭಿವೃದ್ಧಿಗೊಂಡ ನಂತರ ಪರಿಶೀಲನಾ ಕಾರ್ಯ ಕೈಗೊಳ್ಳಲಾಗುವುದು. |
| ಆ) | ಕಾರ್ಮಿಕರಿಗೆ ನೀಡುವ ಸೌಲಭ್ಯಗಳನ್ನು ಅನರ್ಹರಿಗೆ ತಡೆಹಿಡಿಯುವಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಕಾರ್ಮಿಕರಿಗೆ ನೀಡುವ ಸೌಲಭ್ಯಗಳು ಅನರ್ಹರ ಪಾಲಾಗದಂತೆ ತಡೆಹಿಡಿಯುವ ನಿಟ್ಟಿನಲ್ಲಿ ಕಾರ್ಮಿಕ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿಧ ಮಂಡಳಿಗಳ ಮೂಲಕ ಕೈಗೊಳ್ಳಲಾಗುತ್ತಿರುವ ಕ್ರಮದ ವಿವರ ಕೆಳಕಂಡಂತಿದೆ. |
| ಇ) | ಅನರ್ಹ ಕಾರ್ಮಿಕರ ಕಾರ್ಡ್ ಗಳನ್ನು ಶಾಶ್ವತವಾಗಿ ರದ್ದುಪಡಿಸಲು ಸರ್ಕಾರ ಕ್ರಮ ಕೈಗೊಂಡಿದೆಯೇ; | **ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ:**<br>ಮಂಡಳಿಯು ನಿಗಧಿಪಡಿಸಿರುವ ಅರ್ಹತಾ ಮಾನದಂಡಗಳನ್ನು ಪೂರೈಸದ ಕಾರ್ಮಿಕರು ನೋಂದಾಣಿಯಾಗುತ್ತಿರುವುದನ್ನು ತಡೆಯುವ ನಿಟ್ಟಿನಲ್ಲಿ ಇಂತಹ ಕಾರ್ಮಿಕರನ್ನು ಪತ್ತೆಹಚ್ಚಲು ಮತ್ತು ಅನರ್ಹ ಫಲಾನುಭವಿಗಳ ನೋಂದಣಿಯ ರದ್ದತಿಗಾಗಿ ದಿನಾಂಕ: 25-01-2023 ರಿಂದ ದಿನಾಂಕ:25-02-2023 ರವರೆಗೆ ಬೋಗಸ್ ಕಾರ್ಡ್ ರದ್ದತಿ ಅಭಿಯಾನವನ್ನು ರಾಜ್ಯದಾದ್ಯಂತ ಎಲ್ಲಾ ಜಿಲ್ಲೆಗಳಲ್ಲಿ ಹಮ್ಮಿಕೊಳ್ಳಲಾಗಿರುತ್ತದೆ. |

| | | |
|---|---|---|
| | | ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ (ಉದ್ಯೋಗದ ಕ್ರಮೀಕರಣ ಮತ್ತು ಸೇವಾ ಷರತ್ತುಗಳು), ಕರ್ನಾಟಕ ನಿಯಮಗಳು, 2006 ನಿಯಮ 20 ಅನ್ನು ತಿದ್ದುಪಡಿ ಮಾಡಿ ಉಪಬಂಧ (7) ಅನ್ನು ಸೇರಿಸಲಾಗಿದ್ದು, ಇದರನ್ವಯ ಮಂಡಳಿಯು ನಿಗಧಿಪಡಿಸಿರುವ ಅರ್ಹತಾ ಮಾನದಂಡಗಳನ್ನು ಪೂರೈಸದ ನೋಂದಣಿಯನ್ನು ರದ್ದುಪಡಿಸಲು ನೋಂದಣಾಧಿಕಾರಿಗಳಿಗೆ ಅಧಿಕಾರವನ್ನು ನೀಡಲಾಗಿದೆ.<br><br>ರಾಜ್ಯದಾದ್ಯಂತ ಪ್ರಚಾರವಾಗುತ್ತಿರುವ 11 ವಾರ್ತಾ ಪತ್ರಿಕೆಗಳಲ್ಲಿ ಪ್ರಕಟಣೆಯನ್ನು ನೀಡಿ ಅರ್ಹತಾ ಮಾನದಂಡಗಳನ್ನು ಪೂರೈಸದ ಕಾರ್ಮಿಕರು ಸ್ವಯಂ ಪ್ರೇರಿತರಾಗಿ ತಮ್ಮ ನೋಂದಣಿಯನ್ನು ರದ್ದುಪಡಿಸಿಕೊಳ್ಳಬೇಕೆಂದು, ಇಲ್ಲದಿದ್ದಲ್ಲಿ ಕಾನೂನು ಕ್ರಮ ಕೈಗೊಳ್ಳಲಾಗುವುದೆಂಬ ಮನವಿ ಹಾಗೂ ಎಚ್ಚರಿಕೆಯನ್ನು ನೀಡಲಾಗಿದೆ.<br><br>ಮುಂದುವರೆದು, ರಾಜ್ಯದಾದ್ಯಂತ 3,54,128 ಅನರ್ಹ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ನೋಂದಣಿಯನ್ನು ಪತ್ತೆಹಚ್ಚಲಾಗಿದ್ದು ಈ ಅನರ್ಹ ಕಾರ್ಮಿಕ ಕಾರ್ಡ್ ಗಳನ್ನು ಶಾಶ್ವತವಾಗಿ ರದ್ದುಪಡಿಸಲು ಮಂಡಳಿಯ ವತಿಯಿಂದ ಕ್ರಮ ವಹಿಸಲಾಗಿದೆ.<br><br>**ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ:**<br><br>ಈ ಬಗ್ಗೆ ಉಪಪ್ರಶ್ನೆ (ಅ) ದಲ್ಲಿ ಉತ್ತರಿಸಲಾಗಿದೆ. |
| ಈ) | ಅನರ್ಹ ಕಾರ್ಮಿಕರ ಕಾರ್ಡ್ ಗಳನ್ನು ನೋಂದಾಯಿಸಿ ಸರ್ಕಾರದ ಬೊಕ್ಕಸಕ್ಕೆ ನಷ್ಟ ಉಂಟು ಮಾಡಿರುವ ಕಾರ್ಮಿಕ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಲಾಗಿದೆಯೇ? (ಸಂಪೂರ್ಣ ಮಾಹಿತಿಯನ್ನು ಒದಗಿಸುವುದು) | ಕಾರ್ಮಿಕ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ ವತಿಯಿಂದ ಅನರ್ಹ ಕಾರ್ಮಿಕರ ಕಾರ್ಡ್ ಗಳನ್ನು ಗುರುತಿಸಿ ರದ್ದುಗೊಳಿಸುವ ಪ್ರಕ್ರಿಯೆ ಜಾರಿಯಲ್ಲಿದ್ದು, ಪ್ರಕ್ರಿಯೆ ಪೂರ್ಣಗೊಂಡ ನಂತರ, ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದು. |

**ಕಾಇ 124 ಎಲ್ಇಟಿ 2024**

**(ಸಂತೋಷ್ ಎಸ್ ಲಾಡ್)**
**ಕಾರ್ಮಿಕ ಸಚಿವರು**

# ಅನುಬಂಧ-1

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಯು.ಬಿ ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು) ಇವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 934**

**ರಾಜ್ಯದಲ್ಲಿ ಕಾರ್ಮಿಕರ ಹೆಸರಿನಲ್ಲಿ ನೋಂದಾಯಿಸಿಕೊಂಡಿರುವ ಕಾರ್ಮಿಕರಲ್ಲದವರ ಜಿಲ್ಲಾವಾರು ವಿವರ**

| ಕ್ರ.ಸಂ | ಕಛೇರಿಯ ಹೆಸರು | ಕಾರ್ಮಿಕರಲ್ಲದವರ ಕಾರ್ಡ್ ಗಳ ಸಂಖ್ಯೆ. |
|---|---|---|
| 1 | ಕಾರ್ಮಿಕ ಅಧಿಕಾರಿ, ಬೆಂಗಳೂರು | 5768 |
| 2 | ಕಾರ್ಮಿಕ ಅಧಿಕಾರಿ, ಬೆಂಗಳೂರು ಗ್ರಾಮಾಂತರ | 534 |
| 3 | ಕಾರ್ಮಿಕ ಅಧಿಕಾರಿ, ಬಾಗಲಕೋಟೆ | 5057 |
| 4 | ಕಾರ್ಮಿಕ ಅಧಿಕಾರಿ, ಬೆಳಗಾವಿ | 1156 |
| 5 | ಕಾರ್ಮಿಕ ಅಧಿಕಾರಿ, ಬಳ್ಳಾರಿ | 1843 |
| 6 | ಕಾರ್ಮಿಕ ಅಧಿಕಾರಿ, ಬೀದರ್ | 32,187 |
| 7 | ಕಾರ್ಮಿಕ ಅಧಿಕಾರಿ, ಚಾಮರಾಜನಗರ | 808 |
| 8 | ಕಾರ್ಮಿಕ ಅಧಿಕಾರಿ, ಚಿಕ್ಕಮಗಳೂರು | 1634 |
| 9 | ಕಾರ್ಮಿಕ ಅಧಿಕಾರಿ ,ಚಿಕ್ಕಬಳ್ಳಾಪುರ | 1410 |
| 10 | ಕಾರ್ಮಿಕ ಅಧಿಕಾರಿ ಚಿತ್ರದುರ್ಗ | 1851 |
| 11 | ಕಾರ್ಮಿಕ ಅಧಿಕಾರಿ, ದಾವಣಗೆರೆ | 1676 |
| 12 | ಕಾರ್ಮಿಕ ಅಧಿಕಾರಿ, ಹುಬ್ಬಳ್ಳಿ | 10780 |
| 13 | ಕಾರ್ಮಿಕ ಅಧಿಕಾರಿ, ಮಂಗಳೂರು | 1120 |
| 14 | ಕಾರ್ಮಿಕ ಅಧಿಕಾರಿ, ಗದಗ | 3531 |
| 15 | ಕಾರ್ಮಿಕ ಅಧಿಕಾರಿ, ಹಾಸನ | 2041 |
| 16 | ಕಾರ್ಮಿಕ ಅಧಿಕಾರಿ, ಹಾವೇರಿ | 223230 |
| 17 | ಕಾರ್ಮಿಕ ಅಧಿಕಾರಿ, ಕಲಬುರಗಿ | 7233 |
| 18 | ಕಾರ್ಮಿಕ ಅಧಿಕಾರಿ, ಕೊಡಗು | 170 |
| 19 | ಕಾರ್ಮಿಕ ಅಧಿಕಾರಿ, ಕೋಲಾರ | 1456 |
| 20 | ಕಾರ್ಮಿಕ ಅಧಿಕಾರಿ, ಕೊಪ್ಪಳ | 1309 |
| 21 | ಕಾರ್ಮಿಕ ಅಧಿಕಾರಿ, ಮಂಡ್ಯ | 359 |
| 22 | ಕಾರ್ಮಿಕ ಅಧಿಕಾರಿ,ಮೈಸೂರು | 1640 |
| 23 | ಕಾರ್ಮಿಕ ಅಧಿಕಾರಿ, ರಾಯಚೂರು | 655 |
| 24 | ಕಾರ್ಮಿಕ ಅಧಿಕಾರಿ, ರಾಮನಗರ | 2171 |
| 25 | ಕಾರ್ಮಿಕ ಅಧಿಕಾರಿ, ತುಮಕೂರು | 803 |
| 26 | ಕಾರ್ಮಿಕ ಅಧಿಕಾರಿ, ಶಿವಮೊಗ್ಗ | 7530 |
| 27 | ಕಾರ್ಮಿಕ ಅಧಿಕಾರಿ, ಯಲ್ಲಾಪುರ | 2474 |
| 28 | ಕಾರ್ಮಿಕ ಅಧಿಕಾರಿ, ಕಾರವಾರ | 28796 |
| 29 | ಕಾರ್ಮಿಕ ಅಧಿಕಾರಿ, ಉಡುಪಿ | 187 |
| 30 | ಕಾರ್ಮಿಕ ಅಧಿಕಾರಿ ವಿಜಯಪುರ | 2237 |
| 31 | ಕಾರ್ಮಿಕ ಅಧಿಕಾರಿ, ವಿಜಯನಗರ | 1612 |
| 32 | ಕಾರ್ಮಿಕ ಅಧಿಕಾರಿ, ಯಾದಗಿರಿ | 870 |
| | **ಒಟ್ಟು** | **354128** |